# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1196 |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 13-03-2026 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ರೈತ ಸಂಪರ್ಕ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ | ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಒಟ್ಟು 14 ರೈತ ಸಂಪರ್ಕ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. (ಸದರಿ 14 ರೈತ ಸಂಪರ್ಕ ಕೇಂದ್ರಗಳ ಪೈಕಿ ಗುಡದೂರು ಮತ್ತು ಬಳಗಾನೂರು 02 ರೈತ ಸಂಪರ್ಕ ಕೇಂದ್ರಗಳು ನೂತನ ಮಸ್ಕಿ ತಾಲ್ಲೂಕಿಗೆ ಒಳಪಡುತ್ತವೆ.) |
| ಆ) | ಸದರಿ ರೈತ ಸಂಪರ್ಕ ಕೇಂದ್ರಗಳಲ್ಲಿ ಸುಮಾರು 14 ಕೇಂದ್ರಗಳ ಮೇಲ್ಛಾವಣಿಯು ಶಿಥಿಲಗೊಂಡಿದ್ದು, ಮಳೆ ಬಂದರೆ ಸೋರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಸಿಂಧನೂರು ತಾಲ್ಲೂಕಿನಲ್ಲಿನ ಪ್ರಸ್ತುತ ಒಟ್ಟು 14 ರೈತ ಸಂಪರ್ಕ ಕೇಂದ್ರಗಳಲ್ಲಿ, ಹುಡಾ ರೈತ ಸಂಪರ್ಕ ಕೇಂದ್ರದಲ್ಲಿ ಮೇಲ್ಛಾವಣಿಯು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಇ) | ಬಂದಿದ್ದಲ್ಲಿ, ಸರ್ಕಾರದಿಂದ ಈ ಸಂಬಂಧ ಯಾವ ಕ್ರಮವಹಿಸಲಾಗಿದೆ; | ಶಿಥಿಲಗೊಂಡಿರುವ ರೈತ ಸಂಪರ್ಕ ಕೇಂದ್ರದಲ್ಲಿ ಮೇಲ್ಛಾವಣಿಯ ದುರಸ್ತಿಯನ್ನು ಮುಂಬರುವ ಸಾಲಿನಲ್ಲಿ ಅನುದಾನ ಲಭ್ಯತೆಯ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು. |
| ಈ) | ಯಾವ ಕಾಲ ಮಿತಿಯೊಳಗೆ ಸದರಿ ರೈತ ಸಂಪರ್ಕ ಕೇಂದ್ರಗಳಿಗೆ ಹೊಸ ಕಟ್ಟಡಗಳನ್ನು ನಿರ್ಮಿಸಲು ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲಾಗುವುದು ? | 2025-26 ನೇ ಸಾಲಿನಲ್ಲಿ RIDF-31ರಡಿ ಸಿಂಧನೂರು ತಾಲ್ಲೂಕಿನ ವಲ್ಕಂದಿನ್ನಿ ಹೋಬಳಿಯಲ್ಲಿ ರೈತ ಸಂಪರ್ಕ ಕೇಂದ್ರ ಮತ್ತು ಗೋದಾಮು ನಿರ್ಮಾಣ ಕಾಮಗಾರಿಯನ್ನು ರೂ.200.00 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. ಬಳಗಾನೂರುನಲ್ಲಿ ನಿವೇಶನ ಲಭ್ಯವಿಲ್ಲದ ಕಾರಣ ರೈತ ಸಂಪರ್ಕ ಕೇಂದ್ರ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. |

ಸಂಖ್ಯೆ: AGRI/52/ACT/2026

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು